



ಅರುಣ ಪಿ. ಭಟ್ಟ


## ವಾರಭವಿಷ್ಯ: 01.05.2025ರಿಂದ 07.05.2025ರವರೆಗೆ




ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಆ ಕಾರಣಕ್ಕಾಗಿ ಹಲವು ಕೆಲಸ– ಕಾರ್ಯಗಳನ್ನು ಪೂರೈಸಲಾಗುತ್ತದೆ. ಇದರಿಂದ ನಿಮಗೆ ಸಂತುಷ್ಟವಾಗುತ್ತದೆ. ಸಹೋದ್ಯೋಗಿಗಳ ಜೊತೆ ಇರುವ ಭಿನ್ನಾಭಿಪ್ರಾಯಗಳನ್ನು ಮರೆಯಲು ಪ್ರಯತ್ನ ಮಾಡುತ್ತೀರಿ. ಶುಭದಿನ: 01. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಶುಭ ಕಾರ್ಯವನ್ನು ಆಯೋಜಿಸುವ ಸಾಧ್ಯತೆ ಇದೆ. ಗ್ರಹಗತಿಗಳು ನಿಮಗೆ ಅನುಕೂಲಕರವಾಗಿವೆ. ಈ ಅವಧಿಯಲ್ಲಿ ಅತಿ ಮುಖ್ಯವಾದ ಕೆಲಸಗಳನ್ನು ಮಾಡಿ. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ, ವರ್ಚಸ್ಸು ಹೆಚ್ಚುವ ಸಾಧ್ಯತೆ ಇದೆ. ಸಹೋದ್ಯೋಗಿಗಳ ಜೊತೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ಬಾಕಿ ಕೆಲಸಗಳನ್ನು ಪೂರ್ಣಗೊಳಿಸುತ್ತೀರಿ. ಶುಭದಿನ: 06. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.





ಆರೋಗ್ಯ ಸುಧಾರಿಸುವುದು. ಆಸ್ತಿ ಖರೀದಿ ಬಗ್ಗೆ ಇರುವ ಚಿಂತನೆ ಫಲಪ್ರದವಾಗಬಹುದು. ಕಲಾವಿದರಿಗೆ, ಸಾಹಿತಿಗಳಿಗೆ, ರಾಜಕೀಯದ ಅವಕಾಶ. ಸಂಘ ಸಂಸ್ಥೆಗಳಿಂದ ಧನಲಾಭ. ಶತ್ರುಗಳು ಹಿಂದೆ ಸರಿಯುವರು. ವೃತ್ತಿ ವ್ಯವಹಾರದಲ್ಲಿ ಲಾಭ. ವ್ಯಾವಹಾರಿಕ ಅನುಕೂಲತೆ. ಸರಕಾರಿ ಕೆಲಸ ಶೀಘ್ರ ಆಗುವುದು. ನಿಮ್ಮ ಕೆಲಸಗಳಿಗೆ ಮನ್ನಣೆ ದೊರೆಯುವುದು. ಶುಭದಿನ: 04. ಚಂಡಿ ಪಾರಾಯಣ ಮಾಡಿರಿ.





ವಾರದ ಆರಂಭದಲ್ಲಿ ನವೋಲ್ಲಾಸ ಬರುವುದು. ಆದಾಯದ ಒಂದು ಭಾಗವನ್ನು ಧರ್ಮ ದಾನಕ್ಕಾಗಿ ಖರ್ಚು ಮಾಡಲಿದ್ದೀರಿ. ಮಿತ್ರರಿಗೆ ಸಹಾಯ. ವ್ಯಾಪಾರದಲ್ಲಿ ಅಧಿಕ ಲಾಭ. ಹಳೆಯ ಮಿತ್ರರ ಆಗಮನ. ಹಲವು ದಿನಗಳ ಸಮಸ್ಯೆ ಬಗೆಹರಿಯುವುದು. ಮನೆಯಲ್ಲಿ ಸಂಭ್ರಮ. ಮಕ್ಕಳಿಂದ ಶುಭವಾರ್ತೆ. ಮಹತ್ವದ ಕಾಗದ ಪತ್ರಗಳ ರಕ್ಷಣೆ. ಸಹೋದರರ ಸಹಾಯ. ಶುಭದಿನ: 04. ಶಿವ ಕವಚ ಓದಿರಿ.




ಕುಟುಂಬದ ಸದಸ್ಯರಿಗೆ ಕೆಲವು ಕೆಲಸಗಳನ್ನು ವಹಿಸುತ್ತೀರಿ. ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಆದರೆ ವಿರೋಧಿ ಪಾಳಯದವರು ಈ ವಿಚಾರದಲ್ಲಿ ಇನ್ನಷ್ಟು ಸಮಸ್ಯೆಗೆ ಎಳೆಯಲಿದ್ದಾರೆ. ಕಾನೂನಿಗೆ ಸಂಬಂಧಿಸಿದ ವಿಚಾರಗಳಲ್ಲಿ ತೊಡಗಿಕೊಳ್ಳಬೇಕಾದ ಅಗತ್ಯ ಕಂಡುಬರುತ್ತದೆ. ಶುಭದಿನ: 07. ಸೌಂದರ್ಯಲಹರಿ ಪಠಿಸಿರಿ.





ಎಂಜಿನಿಯರಿಂಗ್ ಕ್ಷೇತ್ರದವರಿಗೆ ಈ ಹಿಂದೆಂದಿಗಿಂತ ಹೆಚ್ಚಿನ ಅವಕಾಶಗಳು ಬರುತ್ತವೆ. ನಿಮ್ಮ ತಾಂತ್ರಿಕ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಸಾಧ್ಯ ಆಗುತ್ತದೆ. ನಿಮ್ಮಲ್ಲಿ ಆಗುತ್ತಿರುವ ಸಕಾರಾತ್ಮಕ ಪರಿಣಾಮ ಅನುಭವಕ್ಕೆ ಬರುತ್ತದೆ. ಕುಟುಂಬದೊಳಗೆ ಸಂತಸದ ವಾತಾವರಣ ಇರುತ್ತದೆ. ಈವರೆಗಿನ ನಿಮ್ಮ ಆದಾಯ ಮೂಲಗಳಿಂದ ಬರುವ ಗಳಿಕೆ ಮತ್ತಷ್ಟು ಹೆಚ್ಚಾಗಲಿದೆ. ಶುಭದಿನ: 05. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.





ವೃತ್ತಿಪರ ಬದುಕಿನಲ್ಲಿ ಲಾಭ ಹಾಗೂ ಮಹತ್ತರವಾದ ಪ್ರಗತಿ ಕಾಣುವ ಯೋಗ ಇದೆ. ಮನೆಗೆ ಎಲೆಕ್ಟ್ರಾನಿಕ್ ವಸ್ತುಗಳ ಖರೀದಿ ಮಾಡಲಿದ್ದೀರಿ. ಸೇವಾ ವಲಯದಲ್ಲಿ ಕಾರ್ಯ ನಿರ್ವಹಿಸುವವರಿಗೆ ಪ್ರತಿಭೆಯನ್ನು ಪ್ರದರ್ಶಿಸಲು ಅತ್ಯುತ್ತಮ ಅವಕಾಶಗಳಿವೆ. ಶೈಕ್ಷಣಿಕ ಅರ್ಹತೆ ಹೆಚ್ಚಿಸಿಕೊಳ್ಳಲು ಪ್ರಯತ್ನಿಸುತ್ತೀರಿ. ಆರೋಗ್ಯವು ಚೆನ್ನಾಗಿರುತ್ತದೆ. ಶುಭದಿನ: 03. ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.





ಈ ಅವಧಿಯಲ್ಲಿ ತಾಳ್ಮೆ ಮತ್ತು ಧೈರ್ಯ ಬಹಳ ಮುಖ್ಯವಾಗುತ್ತದೆ. ಮುಖ್ಯವಾಗಿ ಸಮಯದ ಕೊರತೆ ವಿಪರೀತವಾಗಿ ಕಾಡುತ್ತದೆ. ವಾರದ ಮಧ್ಯ ಭಾಗದಲ್ಲಿ ವ್ಯಾಪಾರ ವ್ಯವಹಾರಗಳ ವಿಸ್ತರಣೆಗೆ ಶ್ರಮ ಹಾಕುತ್ತೀರಿ. ನಿಮ್ಮ ಕೆಲಸ ಕಾರ್ಯಗಳಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತಂದುಕೊಳ್ಳುತ್ತೀರಿ. ನಿಮ್ಮ ಆರ್ಥಿಕ ಸ್ಥಿತಿ ಅತ್ಯುತ್ತಮವಾಗಿರುತ್ತದೆ. ಶುಭದಿನ: 04. ಶ್ರೀದುರ್ಗಾ ಪಾರಾಯಣ ಮಾಡಿರಿ.





ಆಸ್ತಿ ಖರೀದಿಗೆ ಪ್ರಯತ್ನಿಸುತ್ತಿರುವವರು ಸಂಬಂಧಪಟ್ಟ ಕಾಗದ ಪತ್ರಗಳನ್ನು ಕೂಲಂಕಷವಾಗಿ ಪರಿಶೀಲಿಸಲಿದ್ದೀರಿ. ದೊಡ್ಡ ಪ್ರಮಾದಗಳನ್ನು ತಡೆಯುವಂತೆ ಸನ್ನಿವೇಶಗಳು ನಿಮಗೆ ಪೂರಕ ಆಗಲಿವೆ. ವೈಯಕ್ತಿಕ ಸಂಬಂಧದಲ್ಲಿ ಕೆಲವು ಕಹಿ ಬೆಳವಣಿಗೆಗಳು ಆಗಲಿವೆ. ವಾರದ ಅಂತ್ಯಕ್ಕೆ ಸರಿಯುತ್ತಾ ಕುಟುಂಬದವರ ಬೆಂಬಲ ದೊರೆಯಲಿದೆ. ಶುಭದಿನ: 04. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ವಾರದ ಶುರುವಿನಲ್ಲೇ ವ್ಯಾಪಾರ ಉದ್ಯಮದಲ್ಲಿ ಪ್ರಗತಿ ಕಾಣಿಸುತ್ತದೆ. ಇದರಿಂದ ಆತ್ಮವಿಶ್ವಾಸ ಹೆಚ್ಚಾಗುತ್ತದೆ. ಪ್ರತಿಷ್ಠಿತ ಸಂಸ್ಥೆಯೊಂದರ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆಗಳಿವೆ. ವೈವಾಹಿಕ ಜೀವನ ಸಂತೋಷದಾಯಕವಾಗಿ ಇರುತ್ತದೆ. ಉದ್ಯೋಗ ನಿಮಿತ್ತವಾಗಿ ಪ್ರಯಾಣ ಮಾಡಬೇಕಾಗುತ್ತದೆ. ಶುಭದಿನ: 02. ಕಾಲಭೈರವನ ಸೇವೆ ಮಾಡಿರಿ.




ವಾರದ ಶುರುವಿನಲ್ಲಿ ನಿಮ್ಮ ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ಶ್ರಮಕ್ಕೆ ನಿರೀಕ್ಷಿತ ಫಲಿತಾಂಶ ಕೂಡ ದೊರೆಯಲಿದೆ. ಮಾರಾಟ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಲಾಭ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ಯಾವುದೇ ವಿಚಾರದಲ್ಲಿ ನನಗೆ ತಿಳಿದಿದ್ದೇ ಸತ್ಯ ಎಂಬ ಹಟಮಾರಿತನ ಒಳ್ಳೆಯದಲ್ಲ. ಶುಭದಿನ: 04. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಉನ್ನತ ಶಿಕ್ಷಣಕ್ಕೆ ಯತ್ನಿಸುತ್ತಿರುವವರಿಗೆ ಯಶಸ್ಸು ದೊರೆಯುತ್ತದೆ. ಒತ್ತಡ ಹಾಕಿ ನಿಮ್ಮಿಂದ ಕೆಲಸ ತೆಗೆಸುವ ಯತ್ನಗಳಾಗುತ್ತವೆ. ಉದ್ಯೋಗ ಸ್ಥಳದಲ್ಲಿ ಭಾವನಾತ್ಮಕವಾಗಿ ಕೆಲವು ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದೀರಿ. ವೃತ್ತಿಪರ ಜೀವನದಲ್ಲಿ ಅತ್ಯುತ್ತಮವಾದ ಬೆಳವಣಿಗೆ ಇದೆ. ಆದಾಯ ಅನುಕೂಲಕರವಾಗಿ ಇರಲಿದೆ. ಶುಭದಿನ: 06. ಕನಕಧಾರಾ ಸ್ತೋತ್ರ ಪಠಣ ಮಾಡಿರಿ.